**3** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ**.,**ರವರ ನ್ಯಾಯಾಲಯ**,** ಕಡೂರು**.**

<u>ಸಿ.ಸಿ.ನಂ**. 649/2019**</u>

ದಿನಾಂಕಃ **14.08.2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು**.**

| | | |
|---|---|---|
| ಸಾಕ್ಷಿಯ ಹೆಸರು ಃ | ರವೀಶ್ | ಚಾಸಾ-2, ಪ್ರಾಸ.-2 |
| ತಂದೆಯ ಹೆಸರುಃ | ಸೋಮಶೇಖರಪ್ಪ | |
| ವಯಸ್ಸು ಃ | 54 ವರ್ಷ | |
| ಉದ್ಯೋಗ ಃ | ವ್ಯವಸಾಯ | |
| ವಾಸ ಃ | ದೇವರಹಳ್ಳಿ | |

<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ</u>

ಚಾಸಾ-1 ಮತ್ತು 3 ನನಗೆ ಗೊತ್ತು. ಸಾಕ್ಷಿಯು ನಿಪಿ-2 ರ ಕೃತ್ಯ ನಡೆದ ಸ್ಥಳದ ಮಹಜರ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಚಾಸಾ-1 ರವರ ಜಮೀನಿನಲ್ಲಿ ಸುಮಾರು 10 ವರ್ಷಗಳ ಹಿಂದೆ ಕೊಬ್ಬರಿ ಕಳ್ಳತನವಾದ ವಿಚಾರವಾಗಿ ಹಾಕಿರುತ್ತೇನೆ. ಆ ಸಮಯದಲ್ಲಿ ಬೇರೆ ಯಾರು ಇದ್ದರು ಎಷ್ಟು ಸಮಯದಿಂದ ಎಷ್ಟು ಸಮಯದವರೆಗೆ ಮಹಜರ್ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನಿಪಿ-2 ರಲ್ಲಿ ಬರೆದಿರುವ ವಿಚಾರಗಳು ನನಗೆ ಮರೆತುಹೋಗಿದೆ. ಸಾಕ್ಷಿಯು ನಿಪಿ-3 ರ ಛಾಯಾಚಿತ್ರದಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ನಿಪಿ-3 ನ್ನು ಚಾಸಾ-1 ರವರ ಜಮೀನಿನಲ್ಲಿ ತೆಗೆಯಲಾಗಿರುತ್ತದೆ.

ಸಾಕ್ಷಿಯು ದಿಃ 15.12.2017 ರ ಮಹಜರ್ ನಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-6 ಎಂದು, ಸಾಕ್ಷಿ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು. ನಿಪಿ-6 ರ ಸಹಿಯನ್ನು ಯಾವ ಸಮಯದಲ್ಲಿ ಮತ್ತು ಯಾವ ವಿಚಾರವಾಗಿ ಹಾಕಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ಅದರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಗೆ ಒಂದು ಛಾಯಾಚಿತ್ರವನ್ನು ತೋರಿಸಲಾಗಿ ಅದರಲ್ಲಿ ತನ್ನ ವಿರುವಿಕೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು. ಸದರಿ ಛಾಯಾಚಿತ್ರವನ್ನು ಯಾವ ಸಮಯದಲ್ಲಿ ಎಲ್ಲಿ ತೆಗೆಯಲಾಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಇರುತ್ತಾರೆ ಎಂದು ನನಗೆ ಗೊತ್ತಿಲ್ಲ.

**(**ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಭಾಗಶಃ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ**,** ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು**)**

<u>ಪಾಟೀಸವಾಲುಃ ಮಾನ್ಯ ಸಸಅ**.** ರವರಿಂದ ಃ</u>

ದಿಃ04.12.2017 ರಂದು ಚಾಸಾ-1 ರವರ ತೋಟದ ಮನೆಯ ಶೆಡ್ ನಿಂದ ಕೊಬ್ಬರಿ ಕಳ್ಳತನವಾದ ವಿಚಾರವಾಗಿ ಚಾಸಾ-1 ರವರು ಬೀರೂರು ಪೋಲಿಸರಿಗೆ ದೂರು ನೀಡಿದ್ದು, ಆ ದೂರಿಗೆ ಸಂಬಂಧಿಸಿದಂತೆ ಕೃತ್ಯ ನಡೆದ ಸ್ಥಳ ಚಾಸಾ-1 ರವರ ಜಮೀನಿನಲ್ಲಿ ಕೃತ್ಯ ನಡೆದ ಸ್ಥಳದ ಮಹಜರ್ ಜರುಗಿಸಲು ನನಗೆ ಮತ್ತು

ಚಾಸಾ-3 ರವರಿಗೆ ಪೋಲಿಸರು ಮಹಜರ್ ಗೆ ಸಹಕರಿಸುವಂತೆ ಕೋರಿದ್ದರು ಎಂದರೆ ಸಾಕ್ಷಿ ಚಾಸಾ-1 ರವರ ಕೋರಿಕೆಯಂತೆ ನಾವು ಹೋಗಿರುತ್ತೇವೆ ಎಂದು ನುಡಿಯುತ್ತಾರೆ. ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ಸಂಜೆ 4.00 ರಿಂದ 5.00 ಗಂಟೆವರೆಗೆ ನಿಪಿ-2 ರಂತೆ ದಿಃ 05.12.2017 ರಂದು ಮಹಜರ್ ಕ್ರಮ ಜರುಗಿಸಿ ನಿಪಿ-3 ರಂತೆ ಛಾಯಾಚಿತ್ರ ತೆಗೆದಿರುತ್ತಾರೆ ಎಂದರೆ ಸರಿ. ದಿಃ 15.12.2017 ರಂದು ಆರೋಪಿತರು ಕಳ್ಳತನ ಮಾಡಿದ ಜಾಗವನ್ನು ತೋರಿಸುವುದಾಗಿ ಹೇಳಿದ ಮೇರೆಗೆ ಸದರಿ ಪ್ರಕ್ರಿಯೆಗೆ ಮಹಜರ್ ಗೆ ಸಹಕರಿಸುವಂತೆ ನನಗೆ ಮತ್ತು ಚಾಸಾ-6 ರವರಿಗೆ ಕೋರಿಕೊಂಡಿದ್ದು, 3 ರಿಂದ 5 ನೇ ಆರೋಪಿತರು ತೋರಿಸಿದ ಸ್ಥಳದಲ್ಲಿ ಮಧ್ಯಾಹ್ನ 2.00 ರಿಂದ 2.30 ರವರೆಗೆ ನಿಪಿ-6 ರಂತೆ ಮಹಜರ್ ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ-7 ರಂತೆ ಛಾಯಾಚಿತ್ರ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ತಿಳಿದಿದ್ದರೂ ಆರೋಪಿತರಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನ್ಯಾಯಾಲಯದ ಮುಂದಿರುವ 3 ಮತ್ತು 4 ನೇ ಆರೋಪಿತರನ್ನು ನಾನು ನೋಡಿರುವುದಿಲ್ಲ.

<u>ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇರುವುದಿಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಎ ಒ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.